ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಅತಿಥಿ ಉಪನ್ಯಾಸಕರ ಸಮಸ್ಯೆಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

48 (81) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಕಳೆದ ಶೈಕ್ಷಣಿಕ ವರ್ಷದಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರ ಸೇವೆಯನ್ನು ಪ್ರಸಕ್ತ ಶೈಕ್ಷಣಿಕ ಸಾಲಿಗೂ ಮುಂದುವರೆಸಲುಸರ್ಕಾರ ತೀರ್ಮಾನಿಸಿದೆಯೇ;

(ಆ) ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಅವರ ಗೌರವಧನ ಪರಿಷ್ಕರಣೆ ಮಾಡಲು ಸರ್ಕಾರ ಚಿಂತಿಸಿದೆಯೇ;

(ಈ) ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಗೌರವಧನ ಪರಿಷ್ಕರಣೆ ಮಾಡಲಾಗುವುದು;

(ಉ) ಸಹಾಯಕ ಪ್ರಾಧ್ಯಾಪಕರ ಮುಂದಿನ ನೇಮಕಾತಿಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಕೃಪಾಂಕ ನೀಡಿ, ವಯೋಮಿತಿ ಸಡಿಲಿಕೆ ಮಾಡಲಾಗುವುದೆ;

(ಊ) ಹಾಗಾದಲ್ಲಿ, ಯಾವ ಪ್ರಮಾಣದ ಕೃಪಾಂಕ ಮತ್ತು ವಯೋಮಿತಿ ಸಡಿಲಿಕೆ ಮಾಡಲಾಗುವುದು?